# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1206 |
| ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13.03.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಪ್ರಸ್ತುತ ಆರ್ಥಿಕ ವರ್ಷದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನಗಳ ಒಟ್ಟು ಅನುದಾನ ಎಷ್ಟು;</td><td>2025-26ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿವಿಧ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಡಿ ಪಾವತಿಯಾದ ವಿವರಗಳು ಈ ಕೆಳಕಂಡಂತಿವೆ.
<table>
<tr><th>ಯೋಜನೆ</th><th>ಪಾವತಿಯಾದ ವಿದ್ಯಾರ್ಥಿಗಳ ಸಂಖ್ಯೆ</th><th>ಪಾವತಿ ಮಾಡಲಾದ ಅನುದಾನ (ರೂ.ಕೋಟಿಗಳಲ್ಲಿ)</th></tr>
<tr><td>ಮೆಟ್ರಿಕ್-ಪೂರ್ವ ವಿದ್ಯಾರ್ಥಿ ವೇತನ</td><td>106597</td><td>42.63</td></tr>
<tr><td>ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ</td><td>211984</td><td>153.04</td></tr>
<tr><td>ಶುಲ್ಕ ಮರುಪಾವತಿ</td><td>344275</td><td>413.90</td></tr>
<tr><td>ವಿದ್ಯಾಸಿರಿ</td><td>43309</td><td>64.96</td></tr>
<tr><td>ಒಟ್ಟು</td><td>706165</td><td>674.53</td></tr>
</table>
</td></tr>
<tr><td>ಆ)</td><td>ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿ ವೇತನ ವಿತರಣೆಯಲ್ಲಿ ಉಂಟಾದ ವಿಳಂಬಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;</td><td>ಕಳೆದ 05 ವರ್ಷಗಳಲ್ಲಿ ಶುಲ್ಕ ಮರುಪಾವತಿ ಕಾರ್ಯಕ್ರಮದಡಿ ಬಾಕಿ ಇರುವ ವಿದ್ಯಾರ್ಥಿಗಳಿಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಶುಲ್ಕ ಮರುಪಾವತಿ ಮಾಡಲು ಕ್ರಮವಹಿಸಲಾಗಿದೆ. ಪ್ರಸ್ತುತ ಹಿಂದಿನ ಸಾಲುಗಳಲ್ಲಿ ಬಾಕಿ ಇದ್ದ 1,54,089 ಅರ್ಹ ವಿದ್ಯಾರ್ಥಿಗಳಿಗೆ ರೂ.174.15 ಕೋಟಿಗಳನ್ನು ಶುಲ್ಕ ಮರುಪಾವತಿ ಮಾಡಲು ಕ್ರಮವಹಿಸಲಾಗಿದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಇ-ಆಡಳಿತ ಇಲಾಖೆ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡುತ್ತಿರುವ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮಗಳಡಿ ವಿದ್ಯಾರ್ಥಿಗಳ ಆಧಾರ್ ಸಂಖ್ಯೆಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಜಮ ಮಾಡಲಾಗುತ್ತಿದೆ. ಆದರೆ ವಿದ್ಯಾರ್ಥಿಗಳ ಶೈಕ್ಷಣಿಕ ದತ್ತಾಂಶದಲ್ಲಿರುವ ಹೆಸರಿಗೂ ಆಧಾರ್‌ನಲ್ಲಿರುವ ಹೆಸರಿಗೂ ವ್ಯತ್ಯಾಸವಿರುತ್ತದೆ,</td></tr>
</table>

...2

| | | |
|---|---|---|
| | | ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಲಿಂಕ್ ಮಾಡಿರುವುದಿಲ್ಲ. ವಿಶ್ವವಿದ್ಯಾಲಯಗಳಿಂದ ಶೈಕ್ಷಣಿಕ ದತ್ತಾಂಶ ಹಂಚಿಕೊಂಡಿರುವುದಿಲ್ಲ ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ 2023-24 ಮತ್ತು 2024-25 ನೇ ಸಾಲುಗಳಿಗೆ ಆರ್ಥಿಕ ವರ್ಷ ಮುಕ್ತಾಯವಾದ ನಂತರವೂ ಅರ್ಜಿ ಸ್ವೀಕರಿಸಲಾಗಿರುತ್ತದೆ. ಈ ಎಲ್ಲಾ ಕಾರಣಗಳಿಂದ ವಿದ್ಯಾರ್ಥಿ ವೇತನ ಪಾವತಿ ಮಾಡಲು ಬಾಕಿ ಇರುತ್ತದೆ. ಬಾಕಿ ಇರುವ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಜಿಲ್ಲಾ/ತಾಲ್ಲೂಕು ಮತ್ತು ವಿದ್ಯಾರ್ಥಿಗಳ ಲಾಗಿನ್‌ನಲ್ಲಿ ಅವಕಾಶ ನೀಡಲಾಗಿರುತ್ತದೆ. ಸದರಿ ಸಮಸ್ಯೆಗಳನ್ನು ಬಗೆಹರಿಸಿಕೊಂಡ ನಂತರ ಈ ವಿದ್ಯಾರ್ಥಿಗಳಿಗೆ ಪಾವತಿ ಮಾಡಲು ಕ್ರಮ ವಹಿಸಲಾಗುವುದು. |
| ಇ) | ವಿದೇಶ ವಿದ್ಯಾಭ್ಯಾಸಕ್ಕಾಗಿ ನೀಡಲಾಗುವ ವಿದ್ಯಾರ್ಥಿ ವೇತನ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು; | 2025-26ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ 26 ನವೀಕರಣ ವಿದ್ಯಾರ್ಥಿಗಳು ವಿದೇಶಿ ವಿದ್ಯಾಭ್ಯಾಸಕ್ಕಾಗಿ ಸರ್ಕಾರದ ಸವಲತ್ತು ಪಡೆದಿರುತ್ತಾರೆ. |
| ಈ) | ಹಿಂದುಳಿದ ವರ್ಗಗಳ ವಸತಿ ನಿಲಯಗಳ ಸ್ಥಿತಿ ಸುಧಾರಣೆಗೆ ಸರ್ಕಾರ ಕೈಗೊಂಡ ಯೋಜನೆಗಳೇನು; | ವಿದ್ಯಾರ್ಥಿನಿಲಯಗಳ ಕಟ್ಟಡಗಳಿಗೆ ದುರಸ್ತಿಯನ್ನು ಕೈಗೊಳ್ಳಲು ಜಿಲ್ಲಾ ವಲಯ ಲೆಕ್ಕಶೀರ್ಷಿಕೆ:2225-11-103-0-40 ರಡಿ ಅನುದಾನವನ್ನು ಒದಗಿಸಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ರೂ.20.00 ಕೋಟಿಗಳನ್ನು ಈ ಉದ್ದೇಶಕ್ಕಾಗಿ ಒದಗಿಸಲಾಗಿರುತ್ತದೆ. ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ರಾಜ್ಯವಲಯ ಕಾರ್ಯಕ್ರಮದಡಿ ರೂ.25.00 ಕೋಟಿಗಳನ್ನು ಒದಗಿಸಲಾಗಿದ್ದು, ಸದರಿ ಅನುದಾನದಲ್ಲಿ ಕಲಬುರಗಿ ವಿಭಾಗದ ವಿದ್ಯಾರ್ಥಿನಿಲಯ ಕಟ್ಟಡಗಳ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ. |

**ಸಂಖ್ಯೆ:ಹಿಂವಕ 216 ಬಿಎಂಎಸ್ 2026**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.